KATK810052142022

**ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ,**

**ಸಿರಾ**

**ಸಿ.ಸಿ. ನಂ.3942/2022**

**ಪಿರ್ಯಾದಿ** : ರಾಜ್ಯದ ಪರವಾಗಿ ಅಬಕಾರಿ ಉಪ ನಿರೀಕ್ಷಕರು,
ಶಿರಾ ವಲಯ ಶಿರಾ

**ವಿರುದ್ಧ**

**ಆರೋಪಿ** : ಜಗನ್ನಾಥ್

**ದೋಷಾರೋಪಣೆ**

**ಶ್ರೀ ನರಸಿಂಹಮೂರ್ತಿ.ಎ., ಬಿ.ಎ.ಎಲ್.ಎಲ್.ಬಿ, ಪ್ರಧಾನ, ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ಆದ ನಾನು**

**ಆರೋಪಿಃ** ಜಗನ್ನಾಥ್ ಬಿನ್ ಓಬಣ್ಣ, 38 ವರ್ಷ
ಬಡಕನಹಳ್, ಗೌಡಗೆರೆ ಹೋಬಳಿ ಶಿರಾ ತಾಲ್ಲೂಕು,
ತುಮಕೂರು.

**ನಿನ್ನ ವಿರುದ್ಧ ಮಾಡುವ ದೋಷಾರೋಪಣೆ ಏನೆಂದರೆ,**

ದಿನಾಂಕ 23.02.2022 ರಂದು ಮಧ್ಯಾಹ್ನ 2.30ಗಂಟೆ ಸಮಯದಲ್ಲಿ ಮಾನ್ಯ ಅಬಕಾರಿ ಉಪ ಆಯುಕ್ತರು, ತುಮಕೂರು ರವರ ನಿರ್ದೇಶನದದಂತೆ ಅಬಕಾರಿ ಉಪ ಅಧೀಕ್ಷಕರು, ಮಧುಗಿರಿ ಉಪವಿಭಾಗ ರವರ ಮಾರ್ಗದರ್ಶನದಲ್ಲಿ ಶಿರಾ ನಗರದಿಂದ ಹಿರಿಯೂರು ಕಡೆಗೆ ಹೋಗುವ ಮಾರ್ಗ ಸಂ.4 ರಲ್ಲಿ ಗಸ್ತು ಮಾಡುತ್ತಿದ್ದಾಗ ಬಂದ ಮಾಹಿತಿ ಮೇರೆಗೆ ನ್ಯೂ ಜೈಹಿಂದ್ ಹೋಟೆಲ್ ಮುಂಭಾಗದಲ್ಲಿ ಆರೋಪಿಯು ಯಮಹ ದ್ವಿಚಕ್ರವಾಹನದ ಸಂ.ಕೆಎ-55-ಹೆಕ್ಸ್-3425 ರಲ್ಲಿ ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿ ವಿವಿಧ ಬ್ರಾಂಡ್ ನ ಒಟ್ಟು 27.810 ಲೀಟರ್ ಮಧ್ಯವನ್ನು ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ವಾಹನದಲ್ಲಿ

ಇಟ್ಟುಕೊಂಡಿದ್ದರಿಂದ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.32 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ನನ್ನ ಸಂಜ್ಞಾನದಲ್ಲಿ ಎಸಗಿರುತ್ತೀರಿ.

2. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀನು ಮೇಲೆ ಹೇಳಿರುವ ಮದ್ಯವನ್ನು ಕಾನೂನುಬಾಹಿರವಾಗಿ ಸ್ಥಳೀಯ ಪ್ರದೇಶಕ್ಕೆ ನಿಗದಿಪಡಿಸಲಾದ ಪ್ರಮಾಣಕ್ಕಿಂತ ಅಧಿಕ ಪ್ರಮಾಣದಲ್ಲಿ ಮಧ್ಯವನ್ನು ಸಾಗಿಸುತ್ತಿದ್ದರಿಂದ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.11 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ನನ್ನ ಸಂಜ್ಞಾನದಲ್ಲಿ ಎಸಗಿರುತ್ತೀರಿ.

3. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀನು ಮೇಲೆ ಹೇಳಿರುವ ಮದ್ಯವನ್ನು ದ್ವಿಚಕ್ರವಾಹನದಲ್ಲಿ ಸಾಗಾಣಿಕೆ ಮಾಡಲು ಯಾವುದೇ ಪರ್ಮಿಟನ್ನು ಪಡೆಯದೆ ಇದ್ದುದರಿಂದ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.12 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ನನ್ನ ಸಂಜ್ಞಾನದಲ್ಲಿ ಎಸಗಿರುತ್ತೀರಿ.

4. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀನು ಯಾವುದೇ ಪರವಾನಗಿ ಪಡೆಯದ ಸಾರ್ವಜನಿಕ ಸ್ಥಳದಲ್ಲಿ ಅಕ್ರಮವಾಗಿ ಮಧ್ಯವನ್ನು ಮಾರಾಟ ಮಾಡುತ್ತಿದ್ದರಿಂದ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.15 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ನನ್ನ ಸಂಜ್ಞಾನದಲ್ಲಿ ಎಸಗಿರುತ್ತೀರಿ.

5. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀನು ಮೇಲೆ ಹೇಳಿರುವ ಮದ್ಯವನ್ನು ಸರ್ಕಾರವು ನಿಗಧಿಪಡಿಸಿದ ಪ್ರಮಾಣಕ್ಕಿಂತ ಅಧಿಕ ಪ್ರಮಾಣದಲ್ಲಿ ದಾಸ್ತಾನು ಮಾಡಿದ್ದರಿಂದ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.14 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ನನ್ನ ಸಂಜ್ಞಾನದಲ್ಲಿ ಎಸಗಿರುತ್ತೀರಿ.

6. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀನು ಮೇಲೆ ಹೇಳಿದ ಮದ್ಯವನ್ನು ಕಾನೂನು ಬಾಹಿರವಾಗಿ ಸಂಗ್ರಹಿಸಿದ್ದು ಸರ್ಕಾರದ ಅಧಿಸೂಚನೆಯ ಮೇರೆಗೆ ಮಧ್ಯವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಬಹುದಾಗಿದ್ದು, ಆದ್ದರಿಂದ ನೀನು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.43 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ನನ್ನ ಸಂಜ್ಞಾನದಲ್ಲಿ ಎಸಗಿರುತ್ತೀರಿ.

7. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀನು ಮೇಲೆ ಹೇಳಿರುವ ಮದ್ಯವನ್ನು ಅಕ್ರಮವಾಗಿ ಶೇಖರಿಸಿಟ್ಟುಕೊಂಡಿದ್ದಲ್ಲದೇ ಯಾವುದೇ ರೀತಿಯ ತೆರಿಗೆಯನ್ನು ಪಾವತಿಸಿಲ್ಲದೇ ಇರುವುದರಿಂದ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ನನ್ನ ಸಂಜ್ಞಾನದಲ್ಲಿ ಎಸಗಿರುತ್ತೀರಿ.

ಈ ಮೇಲಿನ ದೋಷಾರೋಪಣೆಗೆ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡತಕ್ಕದ್ದು.

**ಸಹಿ/-**

**(ನರಸಿಂಹಮೂರ್ತಿ.ಎ)**

**ದಿನಾಂಕಃ 30.05.2025** **ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.**

**ಸಿರಾ.**